**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ:34:ಆರ್‌ಆರ್‌ಸಿ:2014(ಭಾ-1)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ:04.12.2014

**ಸುತ್ತೋಲೆ**

**ವಿಷಯ:** 13ನೇ ಹಣಕಾಸು ಆಯೋಗದ ಅನುದಾನದಡಿ 2014-15ನೇ ಸಾಲಿನ ಗ್ರಾಮೀಣ ರಸ್ತೆ ನಿರ್ವಹಣೆ ಕಾಮಗಾರಿಗಳ ಕ್ರಿಯಾ ಯೋಜನೆಯಂತೆ ಕಾರ್ಯಕ್ರಮ ಅನುಷ್ಠಾನಗೊಳಿಸುವ ಕುರಿತು.

**ಉಲ್ಲೇಖ:** ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಇ:48:ಆಆಕೋ: 2014, ದಿನಾಂಕ:28.11.2014.

2014-15ನೇ ಸಾಲಿನ ಗ್ರಾಮೀಣ ರಸ್ತೆಗಳ ನಿರ್ವಹಣಾ ಕಾಮಗಾರಿಗಳ ಅನುಷ್ಠಾನ ಕುರಿತಂತೆ ಜಿಲ್ಲಾ ಪಂಚಾಯತಿಗಳು ಸಲ್ಲಿಸಿದ ಕ್ರಿಯಾ ಯೋಜನೆ ಆಧರಿಸಿ, ಇಲಾಖೆಯ ರೂ.134.70 ಕೋಟಿಗಳ ಕ್ರೋಢೀಕೃತ ಸಂಕ್ಷಿಪ್ತ ಕ್ರಿಯಾ ಯೋಜನೆಯನ್ನು ದಿನಾಂಕ: 27.10.2014ರಂದು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿ, ಸದರಿ ಕ್ರಿಯಾ ಯೋಜನೆಗೆ ಉನ್ನತ ಮಟ್ಟದ ಸಮಿತಿಯ 14ನೇ ಸಭೆಯು ದಿನಾಂಕ:18.11.2014ರಂದು ನಡೆದ ಸಭೆಯಲ್ಲಿ ಅನುಮೋದನೆ ನೀಡಿದ್ದು, ಸದರಿ ಕ್ರಿಯಾ ಯೋಜನೆಯಂತೆ ಗ್ರಾಮೀಣ ರಸ್ತೆಗಳ ನಿರ್ವಹಣೆಯನ್ನು ಕೈಗೊಳ್ಳಬಹುದೆಂದು ಉಲ್ಲೇಖಿತ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ತಿಳಿಸಲಾಗಿದೆ. ಅದರಂತೆ, ನಿಮ್ಮ ಜಿಲ್ಲೆಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಪ್ರಸ್ತುತ ಸಾಲಿನಲ್ಲಿ ಈ ಕಾರ್ಯಕ್ರಮದಡಿಯ ಅನುದಾನವನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳಬೇಕಾಗಿರುವುದರಿಂದ ನಿಮ್ಮ ಜಿಲ್ಲೆಯ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅಗತ್ಯ ಪ್ರಕ್ರಿಯೆಯನ್ನು ತಕ್ಷಣದಿಂದ ಪ್ರಾರಂಭಿಸುವಂತೆ ಹಾಗೂ ಈ ಯೋಜನೆಯಡಿಯ ಕಾಮಗಾರಿಗಳ ಗುಣಮಟ್ಟ ಕಾಪಾಡಲು ಕಾಮಗಾರಿಗಳನ್ನು 3rd Party Inspectionಗೆ ಕಡ್ಡಾಯವಾಗಿ ಒಳಪಡಿಸುವಂತೆ ಮತ್ತು ಕ್ರಿಯಾ ಯೋಜನೆಯ ಎಲ್ಲಾ ಕಾಮಗಾರಿಗಳನ್ನು ದಿನಾಂಕ: 31.03.2015ರೊಳಗೆ ಮುಕ್ತಾಯಗೊಳಿಸಲು ಕ್ರಮ ವಹಿಸಲು ಈ ಮೂಲಕ ಸೂಚಿಸಲಾಗಿದೆ.

4/12/14

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು,**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಅಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಅಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್)5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಖೆಯ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಖೆಯ, ಬಹುಮಹಡಿ ಕಟ್ಟಡ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿ.ಪಂ.) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.
15. ಅಧೀನ ಕಾರ್ಯದರ್ಶಿಗಳು, ವೆಚ್ಚ-6, ಜಿ.ಪಂ. ಆರ್ಥಿಕ ಇಲಾಖೆ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದ್‌ರಾವ್ ಸರ್ಕಲ್, ಬೆಂಗಳೂರು.
17. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
18. ಎಲ್ಲಾ ಜಿಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳು.
19. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು.
20. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು)
21. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.